ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಂಸತ್ತು

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ    ದಿನಾಂಕ : DATE : 27/07/2019

# 'ಹಫೀಜ್, ಮಸೂದ್‌ಗೆ ಉಗ್ರ ಪಟ್ಟ ಕಟ್ಟಲು ಆದ್ಯತೆ'

ಉದಯ 27/7/19

ನವದೆಹಲಿ: ಅಕ್ರಮ ಚಟುವಟಿಕೆ ತಡೆ ತಿದ್ದುಪಡಿ ಮಸೂದೆಗೆ ಈಗಾಗಲೇ ಲೋಕಸಭೆಯಲ್ಲಿ ಅನುಮೋದನೆ ಲಭ್ಯವಾಗಿದ್ದು, ರಾಜ್ಯಸಭೆಯಲ್ಲೂ ಅನುಮೋದನೆಗೊಂಡು ಕಾನೂನಾಗಿ ಜಾರಿಗೆ ಬರುತ್ತಿದ್ದಂತೆಯೇ ಮೊದಲು ಉಗ್ರ ಹಫೀಜ್ ಸಯೀದ್ ಮತ್ತು ಮಸೂದ್ ಅಜರ್‌ನನ್ನು ಉಗ್ರ ಎಂದು ಘೋಷಿಸಲಾಗುತ್ತದೆ ಎಂದು ಗೃಹ ಸಚಿವಾಲಯ ತಿಳಿಸಿದೆ.

ಸದ್ಯ ಈ ಕಾಯ್ದೆಯಡಿ ಸಂಘಟನೆಗಳನ್ನು ಮಾತ್ರ ಉಗ್ರ ಸಂಘಟನೆ ಎಂದು ಘೋಷಿಸಬಹುದಾಗಿದ್ದು, ಯಾವುದೇ ವ್ಯಕ್ತಿಯನ್ನು ಉಗ್ರನೆಂದು ಘೋಷಿಸಲು ಅವಕಾಶವಿರಲಿಲ್ಲ. ಈ ಸಂಬಂಧ ಈಗ ತಿದ್ದುಪಡಿ ಮಾಡಲಾಗಿದ್ದು, ಇನ್ನು ಮುಂದೆ ವ್ಯಕ್ತಿಯನ್ನೂ ಉಗ್ರ ಎಂದು ಘೋಷಿಸುವ ಅವಕಾಶವಿದೆ. ವಿಪಕ್ಷಗಳ ವಿರೋಧದ ನಡುವೆಯೂ ಲೋಕಸಭೆಯಲ್ಲಿ ಈ ವಿಧೇಯಕಕ್ಕೆ ಅನುಮೋದನೆ ಲಭ್ಯವಾಗಿದೆ. ಪುಲ್ವಾಮಾ ದಾಳಿಯ ಸಂಚುಕೋರ ಮಸೂದ್ ಅಜರ್ ಮತ್ತು ಮುಂಬೈ ದಾಳಿ ಸಂಚುಕೋರ ಹಫೀಜ್ ಸಯೀದ್‌ನನ್ನು ಮೊದಲಿಗೆ ಈ ಪಟ್ಟಿಯಲ್ಲಿ ಸೇರಿಸಲಾಗುತ್ತದೆ. ಇದರಿಂದ ದೇಶದಲ್ಲಿ ಇವರ ಓಡಾಟಕ್ಕೆ ನಿಷೇಧ ವಿಧಿಸಲಾಗುತ್ತದೆ. ಅಷ್ಟೇ ಅಲ್ಲ, ಈ ಕಾಯ್ದೆಯು ವಿಶ್ವಸಂಸ್ಥೆಯ ನಿಲುವಳಿಗೆ ಅನುಗುಣವಾಗಿದೆ ಎಂದು ಗೃಹ ಸಚಿವಾಲಯ ತಿಳಿಸಿದೆ.

**ಕಂಪನಿ ಕಾಯ್ದೆಗೆ ತಿದ್ದುಪಡಿ:** ಇದೇ ವೇಳೆ, ಕಾರ್ಪೊರೇಟ್ ಕಂಪನಿಗಳ ಸಾಮಾಜಿಕ ಹೊಣೆಗಾರಿಕೆ ಹೆಚ್ಚಿಸುವ ಮತ್ತು ರಾಷ್ಟ್ರೀಯ ಕಂಪನಿ ಕಾನೂನು ನ್ಯಾಯಾಧಿಕರಣ(ಎನ್‌ಸಿಎಲ್‌ಟಿ)ದ ಹೊರೆ ಕಡಿಮೆಗೊಳಿಸುವಂಥ ಪ್ರಸ್ತಾಪವಿರುವ ಕಂಪನಿಗಳ ಕಾಯ್ದೆಗೆ ತಿದ್ದುಪಡಿ ತರುವ ವಿಧೇಯಕಕ್ಕೆ ಲೋಕಸಭೆಯಲ್ಲಿ ಶುಕ್ರವಾರ ಅಂಗೀಕಾರ ದೊರೆತಿದೆ. ಈ ನಡುವೆ, ದೇಶದ ಇತರೆ ಭಾಗಗಳಲ್ಲೂ ಬುಲೆಟ್ ರೈಲು ಜಾಲ ಸ್ಥಾಪಿಸುವ ಬಗ್ಗೆ ಅಧ್ಯಯನ ನಡೆಸಲಾಗುತ್ತಿದೆ ಎಂದು ರೈಲ್ವೆ ಖಾತೆ ಸಹಾಯಕ ಸಚಿವ ಸುರೇಶ್ ಅಂಗಡಿ ತಿಳಿಸಿದ್ದಾರೆ.

**1 ಕೋಟಿ ಮರಗಳು ಧರೆಗೆ:** ಅಭಿವೃದ್ಧಿ ಕಾರ್ಯಗಳಿಗಾಗಿ ಕಳೆದ 5 ವರ್ಷಗಳಲ್ಲಿ 1 ಕೋಟಿ ಮರಗಳನ್ನು ಕಡಿಯಲು ಪರಿಸರ ಸಚಿವಾಲಯ ಅನುಮತಿ ಕೊಟ್ಟಿದೆ ಎಂದು ಸರ್ಕಾರ ಲೋಕಸಭೆಯಲ್ಲಿ ಮಾಹಿತಿ ನೀಡಿದೆ.

**ಮತ ಕುರಿತು ಭಿನ್ನಮತ:** ದೇಶದಲ್ಲಿ ಮತದಾನ ಮಾಡುವುದನ್ನು ಕಡ್ಡಾಯಗೊಳಿಸುವ ಬಗ್ಗೆ ಲೋಕಸಭೆ ಸದಸ್ಯರಲ್ಲೇ ಭಿನ್ನಾಭಿಪ್ರಾಯ ಮೂಡಿದೆ.

## ಅಜಂ ಖಾನ್ ವಿರುದ್ಧ ಸಿಡಿದೆದ್ದ ಸಂಸದೆಯರು



ಬಿಜೆಪಿ ಸದಸ್ಯೆ ರಮಾದೇವಿ ಬಗ್ಗೆ ಆಕ್ಷೇಪಾರ್ಹ ಪದ ಬಳಕೆ ಮಾಡಿದ ಸಮಾಜವಾದಿ ಪಕ್ಷದ ಸಂಸದ ಅಜಂ ಖಾನ್ ವಿರುದ್ಧ ಲೋಕಸಭೆಯಲ್ಲಿ ಮಹಿಳಾ ಸಂಸದರು ಸಿಡಿದೆದ್ದಿದ್ದಾರೆ. ಪಕ್ಷಭೇದ ಮರೆತು ಖಾನ್ ಹೇಳಿಕೆಯನ್ನು ಖಂಡಿಸಿರುವ ಸಂಸದೆಯರು, ಅಜಂ ಖಾನ್ ಕೂಡಲೇ ಕ್ಷಮೆ ಯಾಚಿಸಬೇಕು ಅಥವಾ ಅವರನ್ನು ಸದನದಿಂದ ಅಮಾನತು ಮಾಡಬೇಕು ಎಂದು ಪಟ್ಟು ಹಿಡಿದಿದ್ದಾರೆ.

ಕೊನೆಗೆ, ಕ್ಷಮೆ ಕೇಳುವಂತೆ ಸ್ಪೀಕರ್ ಅವರೇ ಅಜಂ ಖಾನ್‌ಗೆ ಸೂಚಿಸಲಿದ್ದಾರೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಷಿ ನುಡಿದಿದ್ದು, ವಿವಾದವನ್ನು ತಣ್ಣಗಾಗಿಸಿದ್ದಾರೆ. ಗುರುವಾರ ತ್ರಿವಳಿ ತಲಾಖ್ ವಿಧೇಯಕ ಕುರಿತ ಚರ್ಚೆ ವೇಳೆ ಸ್ಪೀಕರ್ ಪೀಠದಲ್ಲಿದ್ದ ರಮಾದೇವಿ ಅವರನ್ನು ಉದ್ದೇಶಿಸಿ ಅಜಂ ಖಾನ್ ಅವಹೇಳನಕಾರಿ ಹೇಳಿಕೆ ನೀಡಿದ್ದರು. ಶುಕ್ರವಾರ ಶೂನ್ಯ ವೇಳೆಯಲ್ಲಿ ಬಿಜೆಪಿಯ ಸಂಘಮಿತ್ರ ಮೌರ್ಯ ಅವರು ಈ ವಿಚಾರವನ್ನೆತ್ತಿದ್ದು, ಇದಕ್ಕೆ ಕಾಂಗ್ರೆಸ್, ಎನ್‌ಸಿಪಿ, ಟಿಎಂಸಿ, ಡಿಎಂಕೆ, ಬಿಜೆಡಿ ಸಂಸದೆಯರು ಕೂಡ ಧ್ವನಿಗೂಡಿಸಿ, ಖಾನ್‌ಗೆ ಕಠಿಣ ಸಂದೇಶ ಕಳುಹಿಸಬೇಕಾದ ಅಗತ್ಯವಿದೆ ಎಂದು ಆಗ್ರಹಿಸಿದರು. ಸಚಿವರಾದ ಸ್ಮೃತಿ ಇರಾನಿ, ನಿರ್ಮಲಾ ಸೀತಾರಾಮನ್ ಕೂಡ ಖಾನ್ ವಿರುದ್ಧ ಕಿಡಿಕಾರಿದರು. ಬಿಎಸ್ಪಿ ನಾಯಕಿ ಮಾಯಾವತಿ ಅವರೂ ಖಾನ್ ಹೇಳಿಕೆ ಖಂಡಿಸಿದ್ದು, ಅವರು ಸದನದಲ್ಲಷ್ಟೇ ಅಲ್ಲ, ಇಡೀ ಮಹಿಳಾ ಲೋಕಕ್ಕೇ ಕ್ಷಮೆ ಕೇಳಬೇಕು ಎಂದಿದ್ದಾರೆ.

## ಪರಿಶೀಲನೆಯಿಲ್ಲದೆ ವಿಧೇಯಕಗಳ ಅಂಗೀಕಾರ

- ರಾಜ್ಯಸಭೆ ಸಭಾಪತಿಗೆ 17 ಪಕ್ಷಗಳ ನಾಯಕರ ಪತ್ರ

ಸಂಸತ್‌ನಲ್ಲಿ ಪರಿಶೀಲನೆಯನ್ನೇ ನಡೆಸದೆ ಕ್ಷಿಪ್ರವಾಗಿ ವಿಧೇಯಕಗಳನ್ನು ಅಂಗೀಕರಿಸಲಾಗುತ್ತಿದೆ. ಇದು ಆತಂಕಕಾರಿ ಎಂದು ಆರೋಪಿಸಿ 17 ಪ್ರತಿಪಕ್ಷಗಳ ನಾಯಕರು ಶುಕ್ರವಾರ ರಾಜ್ಯಸಭ ಸಭಾಪತಿ ಎಂ.ವೆಂಕಯ್ಯ ನಾಯ್ಡು ಅವರಿಗೆ ಪತ್ರ ಬರೆದಿದ್ದಾರೆ. ಸೂಕ್ತ ರೀತಿಯಲ್ಲಿ ಪರಿಶೀಲನೆ, ವಿಮರ್ಶೆ ನಡೆಯದೆ ವಿಧೇಯಕಗಳನ್ನು ಅಂಗೀಕರಿಸುವುದು ಸಂಪ್ರದಾಯ ಮೀರಿದಂತೆ ಆಗುತ್ತದೆ. ಸಭಾಪತಿ ಈ ಬಗ್ಗೆ ಮಧ್ಯಪ್ರವೇಶ ಮಾಡಬೇಕು ಎಂದು ಪತ್ರದಲ್ಲಿ ಒತ್ತಾಯಿಸಲಾಗಿದೆ. ಕಾಂಗ್ರೆಸ್, ಎಸ್‌ಪಿ, ಬಿಎಸ್‌ಪಿ, ಟಿಎಂಸಿ, ಆರ್‌ಜೆಡಿ, ಟಿಡಿಪಿ, ಸಿಪಿಐ, ಸಿಪಿಎಂ' ನಾಯಕರು ಪತ್ರಕ್ಕೆ ಸಹಿ ಹಾಕಿದ್ದಾರೆ. '14ನೇ ಲೋಕಸಭೆಯಲ್ಲಿ ಶೇ.60ರಷ್ಟು ವಿಧೇಯಕಗಳನ್ನು ಸಂಸತ್‌ನ ಸ್ಥಾಯಿ ಸಮಿತಿಗಳಿಗೆ ನೀಡಲಾಗಿತ್ತು. 15ನೇ ಲೋಕಸಭೆಯಲ್ಲಿ ಶೇ.71ರಷ್ಟನ್ನು ಸಮಿತಿಗಳ ಅಧ್ಯಯನ, ಪರಾಮರ್ಶೆಗೆ ನೀಡಲಾಗಿತ್ತು. 16ನೇ ಲೋಕಸಭೆ ಅವಧಿಯಲ್ಲಿ ಶೇ.26ರಷ್ಟು ವಿಧೇಯಕಗಳನ್ನು ಮಾತ್ರ ಸಮಿತಿಗಳ ಪರಿಶೀಲನೆ ನೀಡಲಾಗಿತ್ತು. 17ನೇ ಲೋಕಸಭೆ ಅಂದರೆ ಹಾಲಿ ಅವಧಿಯಲ್ಲಿ ಇದುವರೆಗೆ ಕೇವಲ 14ನ್ನು ಮಾತ್ರ ಸಂಸತ್ ಪರಾಮರ್ಶೆಗೆ ಒಳಪಡಿಸಲಾಗಿದೆ ಅಥವಾ ಸ್ಥಾಯಿ ಸಮಿತಿಗಳಿಗೆ ನೀಡಲಾಗಿದೆ' ಎಂದು ಪತ್ರದಲ್ಲಿ ನಾಯಕರು ಕಳವಳ ವ್ಯಕ್ತಪಡಿಸಿದ್ದಾರೆ.

9